ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1785 |
| 2) | ಮಾನ್ಯ ಪರಿಷತ್ತು ಸದಸ್ಯರ ಹೆಸರು | ಶ್ರೀ ಎಂ.ನಾಗರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | 23.03.2026 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ರಾಜ್ಯ ಕೌಶಲ್ಯಾಭಿವೃದ್ಧಿ ನೀತಿ 2025-2032ರ ಅಡಿಯಲ್ಲಿ ಪ್ರಾರಂಭಿಸಲಾದ 4,432 ಕೋಟಿ ರೂ.ಗಳ ಯೋಜನೆಯ (ಮಿಷನ್) ಪ್ರಸ್ತುತ ಹಂತವೇನು ಮತ್ತು ಫೆಬ್ರುವರಿ-2026ರ ಅಂತ್ಯಕ್ಕೆ ರಾಜ್ಯದ ಎಷ್ಟು ಯುವಕರಿಗೆ ಕೃತಕ ಬುದ್ಧಿಮತ್ತೆ, ರೋಬೋಟಿಕ್ಸ್ ಮತ್ತು ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ತರಬೇತಿ ನೀಡಲಾಗಿದೆ; | • ಕರ್ನಾಟಕ ರಾಜ್ಯ ಕೌಶಲ್ಯಾಭಿವೃದ್ಧಿ ನೀತಿ 2025-2032 ಯು ಅಕ್ಟೋಬರ್ 2025ರಲ್ಲಿ ಸರ್ಕಾರದಿಂದ ಅನುಮೋದನೆಗೊಂಡಿರುತ್ತದೆ. ಎಡಿಬಿ ಸಹಾಯದ ಯೋಜನೆಯು 2026-27ನೇ ಸಾಲಿನಿಂದ ಪ್ರಾರಂಭವಾಗಲಿದೆ. ಕರ್ನಾಟಕ ರಾಜ್ಯ ಕೌಶಲ್ಯಾಭಿವೃದ್ಧಿ ನೀತಿಯನುಸಾರ ಖಾಸಗಿ ಸಂಸ್ಥೆಗಳೊಡನೆ ಪಿಪಿಪಿ ಮಾಡೆಲ್‌ರಡಿ ಒಡಂಬಡಿಕೆ ಕೈಗೊಂಡು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ.<br><br>• ಕೃತಕ ಬುದ್ಧಿಮತ್ತೆಗೆ ಸಂಬಂಧಿಸಿದಂತೆ, 2024-25ನೇ ಸಾಲಿನಿಂದ 07 **ಜಿಟಿಟಿಸಿಗಳಲ್ಲಿ** 03 ವರ್ಷ ಅವಧಿಯ Diploma in AI ಮತ್ತು Machine Learning ಕೋರ್ಸ್‌ಗಳಲ್ಲಿ 420 ಅಭ್ಯರ್ಥಿಗಳಿಗೆ ತರಬೇತಿಯನ್ನು ನೀಡಲಾಗುತ್ತಿದೆ. ಇದಲ್ಲದೇ, 06 **ಜಿಟಿಟಿಸಿ ಕೇಂದ್ರಗಳಲ್ಲಿ** 03 ವರ್ಷ ಅವಧಿಯ Diploma in Automation and Robotics ಕೋರ್ಸ್‌ಗಳಲ್ಲಿ 330 ಅಭ್ಯರ್ಥಿಗಳಿಗೆ ತರಬೇತಿಯನ್ನು ನೀಡಲಾಗುತ್ತಿದೆ.<br><br>• ಯಾವುದೇ ಕೋರ್ಸ್‌ಗಳು NSQF ನಿಯಮಾವಳಿಗಳಡಿ ಇಲ್ಲದೇ ಇರುವ ಹಿನ್ನಲೆಯಲ್ಲಿ ಕೆ.ಎಸ್.ಡಿ.ಸಿ. ಯಿಂದ ಈ ಹಿಂದಿನ ಸಾಲಿನಲ್ಲಿ ಅನುಷ್ಠಾನಗೊಳಿಸಲಾಗಿರುವುದಿಲ್ಲ. ಪ್ರಸ್ತುತ ಸಾಲಿನಲ್ಲಿ ಸದರಿ ಕೋರ್ಸ್‌ಗಳನ್ನು NSQF ನಿಯಾವಳಿಗಳಡಿ ತಂದಿರುವ ಹಿನ್ನಲೆಯಲ್ಲಿ AI - Business Analyst, AI Database Administrator, ಮತ್ತು Artificial Intelligence Application Developer ಜಾಬ್ ರೋಲ್‌ಗಳಲ್ಲಿ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಕಾರ್ಯಾದೇಶ ನೀಡಲಾಗಿದೆ.<br><br>• ರೊಬೊಟಿಕ್ಸ್ ಜಾಬ್ ರೋಲ್‌ನಡಿ ಸಿ.ಎಂ.ಕೆ.ಕೆವೈ ಯೋಜನೆಯಡಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳ ಮುಖೇನ ಒಟ್ಟಾರೆ 874 ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗಿರುತ್ತದೆ. |

| | | |
|---|---|---|
| | | • ಉದಯೋನ್ಮುಖ ತಂತ್ರಜ್ಞಾನಕ್ಕೆ ಸಂಬಂಧಿಸಿದಂತೆ, ILC & Future Skills ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗಿದ್ದು, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ILC/FS ಕಾರ್ಯಕ್ರಮಗಳ ಮೂಲಕ 3510 ಯುವನಿಧಿ ಫಲಾನುಭವಿಗಳಿಗೆ ಮೊದಲ ಆದ್ಯತೆ ನೀಡಿ, ಕೈಗಾರಿಕಾ ಆಧಾರಿತ ಕೌಶಲ್ಯ ತರಬೇತಿ ನೀಡಲು 09 ಕೈಗಾರಿಕೆ ತರಬೇತಿ ಸಂಸ್ಥೆಗಳಿಗೆ ಕಾರ್ಯಾದೇಶ ನೀಡಲಾಗಿರುತ್ತದೆ. |
| (ಆ) | 2026-27ನೇ ಆಯ-ವ್ಯಯದಲ್ಲಿ ಗ್ರಾಮೀಣ ಪ್ರದೇಶಗಳಿಂದ ಬರುವ ಜನರಿಗೆ ಸುಧಾರಿತ ತರಬೇತಿ ಲಭ್ಯವಾಗುವಂತೆ ಗ್ರಾಮೀಣ ಮತ್ತು ನಗರ ಕೌಶಲ್ಯ ಕೇಂದ್ರಗಳನ್ನು ವಿಸ್ತರಿಸಲು ಎಷ್ಟು ಅನುದಾನ ಒದಗಿಸಲಾಗಿದೆ; | • 2026-27ನೇ ಸಾಲಿನ ಆಯವ್ಯಯ ಭಾಷಣದಲ್ಲಿ Schneider Electric ಸಹಯೋಗದೊಂದಿಗೆ ಮೈಸೂರು ಮತ್ತು ಕಲಬುರ್ಗಿಯಲ್ಲಿ ಪ್ರತಿ ಕೇಂದ್ರಕ್ಕೆ ರೂ.16.00 ಕೋಟಿಯಂತೆ ಪ್ರತಿ ವರ್ಷ 2000 ಅಭ್ಯರ್ಥಿಗಳಿಗೆ ತರಬೇತಿ ಮತ್ತು ಉದ್ಯೋಗ ದೊರಕಿಸಲು ಘೋಷಿಸಲಾಗಿದೆ.<br><br>• ಸಿ.ಎಂ.ಕೆ.ಕೆ.ವೈ– 1.0 ಯೋಜನೆಯಡಿ ಕೌಶಲ್ಯ ಕರ್ನಾಟಕ ಪೋರ್ಟಲ್ ನಡಿ ಗ್ರಾಮೀಣ ಪ್ರದೇಶಗಳಿಂದ ಬರುವ ಜನರಿಗೆ ಸುಧಾರಿತ ತರಬೇತಿ ಲಭ್ಯವಾಗುವಂತೆ ಗ್ರಾಮೀಣ ಮತ್ತು ನಗರಗಳನ್ನು ಒಳಗೊಂಡಂತೆ 800 ಕೇಂದ್ರಗಳು ನೋಂದಣಿಗೊಂಡಿರುತ್ತವೆ.<br><br>• ಪ್ರಸಕ್ತ ಸಾಲಿನಲ್ಲಿ ಸಿ.ಎಂ.ಕೆ.ಕೆ.ವೈ– 2.0 ಯೋಜನೆಯಡಿ ಖಾಸಗಿ ಹಾಗೂ ಸರ್ಕಾರಿ ಸಂಸ್ಥೆಗಳ ಮೂಲಕ ಅನುಷ್ಠಾನಗೊಳಿಸಲು ಕ್ರಮವಹಿಸಲಾಗಿದೆ. |
| (ಇ) | ಹೆಚ್ಚಿನ ಆದಾಯ, ತಾಂತ್ರಿಕ ಉದ್ಯೋಗಗಳಲ್ಲಿ ಮಹಿಳೆಯರು ಮತ್ತು ಅತೀ ಹಿಂದುಳಿದ ಸಮುದಾಯಗಳ ಭಾಗವಹಿಸುವಿಕೆಯನ್ನು ಹೆಚ್ಚಿಸಲು 2026-27ರ ಆಯ-ವ್ಯಯದಲ್ಲಿ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ? | • 2025-26ನೇ ಸಾಲಿನಲ್ಲಿ ಹೆಚ್ಚಿನ ಆದಾಯ, ತಾಂತ್ರಿಕ ಉದ್ಯೋಗಗಳಲ್ಲಿ ಮಹಿಳೆಯರು ಮತ್ತು ಅತೀ ಹಿಂದುಳಿದ ಸಮುದಾಯಗಳ ಭಾಗವಹಿಸುವಿಕೆಯನ್ನು ಹೆಚ್ಚಿಸಲು NRLM ಯೋಜನೆಯಡಿ ಮಹಿಳೆಯರ ಸ್ವ-ಸಹಾಯ ಗುಂಪುಗಳಿಗೆ ರೂ.1.5 ಲಕ್ಷ ಸಮುದಾಯ ಬಂಡವಾಳ ನಿಧಿ ನೀಡಿ ಆದಾಯ ಹೆಚ್ಚಿಸುವ ಚಟುವಟಿಕೆಗಳಲ್ಲಿ ತೊಡಗಿಸಲು ಕ್ರಮವಹಿಸಲಾಗಿದೆ.<br><br>• ಇದಲ್ಲದೇ, ಡಿಡಿಯುಜಿಕೆವೈ ಯೋಜನೆಯಡಿ 602 ಅಭ್ಯರ್ಥಿಗಳಿಗೆ ತರಬೇತಿ ನೀಡಿ 493 ಅಭ್ಯರ್ಥಿಗಳಿಗೆ ಉದ್ಯೋಗ ನಿಯುಕ್ತಿಗೊಳಿಸಲಾಗಿದೆ. ಇದೇ ರೀತಿ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಕೇಂದ್ರಗಳ ಮೂಲಕ 23,245 ಅಭ್ಯರ್ಥಿಗಳಿಗೆ ಸ್ವ-ಉದ್ಯೋಗ ತರಬೇತಿ ನೀಡಿ 16,380 ಅಭ್ಯರ್ಥಿಗಳಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಕಲ್ಪಿಸಲಾಗಿದೆ. NRLM ಯೋಜನೆಯು ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಮಾತ್ರ ಇದ್ದು, ಇನ್ನುಳಿದಂತೆ ಡಿಡಿಯುಜಿಕೆವೈ ಮತ್ತು R-SETI ಯೋಜನೆಗಳಲ್ಲಿ ಮಹಿಳೆಯರನ್ನೊಳಗೊಂಡಂತೆ ಅತೀ ಹಿಂದುಳಿದ ಸಮುದಾಯಗಳಿಗೆ ತರಬೇತಿ ನೀಡಲಾಗಿದೆ. ಮುಂದುವರೆದು, 32 ಜಿಟಿಟಿಸಿಗಳಲ್ಲಿ, 06 ಎಂ.ಎಸ್.ಡಿ.ಸಿ. ಗಳಲ್ಲಿ, 08 ಕೆಜಿಟಿಟಿಐಗಳಲ್ಲಿ ಮತ್ತು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಅಲ್ಪಾವಧಿ ಹಾಗೂ ದೀರ್ಘಾವಧಿ ತರಬೇತಿಗಳನ್ನು ನೀಡಿ ಉದ್ಯೋಗ ನಿಯುಕ್ತಿಗೊಳಿಸಲಾಗುತ್ತಿದೆ. |

| | | |
|---|---|---|
| | | • PMKVY 4.0 ಯೋಜನೆಯಡಿ 03 ವಿಶ್ವ ವಿದ್ಯಾಲಯಗಳಲ್ಲಿ ಸುಮಾರು 4000 ಅಭ್ಯರ್ಥಿಗಳಿಗೆ ಅಲ್ಪಾವಧಿ ಕೌಶಲ್ಯ ತರಬೇತಿ ನೀಡಲಾಗುತ್ತಿದೆ.<br><br>**ಮೇಲಿನ ಎಲ್ಲಾ ಯೋಜನೆಗಳನ್ನು 2026-27ನೇ ಸಾಲಿನಲ್ಲಿಯೂ ಸಹ ಮುಂದುವರಸಲಾಗುವುದು.** |

**ಸಂಖ್ಯೆ: ಕೌಉಜೀಇ 18 ಕೌಗುಪ್ರ 2026**

(**ಡಾ. ಶರಣಪ್ರಕಾಶ ಆರ್ ಪಾಟೀಲ್**)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು.